	1999-2000	2000-2001
ಪಿ.ಎಸ್.ಐ.ಗಳು	ಇಲ್ಲ	ಇಲ್ಲ
ಎ.ಎಸ್.ಐ.ಗಳು	ಇಲ್ಲ	28
ಹೆಚ್.ಸಿ. ಗಳು	ಇಲ್ಲ	63
ಪಿ.ಸಿ.ಗಳು	ಇಲ್ಲ	153
ಒಟ್ಟು	**ಇಲ್ಲ**	**244**

ನ್ಯಾಯ ಬೆಲೆ ಅಂಗಡಿಗಳ ಮಂಜೂರು

3271 - ಶ್ರೀ ನೀಲಕಂಠಪ್ಪ ಬಿ.ಆರ್. (ತರೀಕೆರೆ) : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನ್ಯಾಯಬೆಲೆ ಅಂಗಡಿಗಳನ್ನು ಮಂಜೂರು ಮಾಡುವಾಗ ಅನುಸರಿಸಲಾಗುವ ನೀತಿ ನಿಯಮಗಳೇನು?

ಆ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರಿಗೆ ಸಾಕಷ್ಟು ಪ್ರಮಾಣದಲ್ಲಿ ನ್ಯಾಯಬೆಲೆ ಅಂಗಡಿಗಳನ್ನು ಮಂಜೂರು ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ರಾಜ್ಯದಲ್ಲಿ ಇರುವ ಒಟ್ಟು ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು?

ಈ) ಇವುಗಳ ಪೈಕಿ ಆಹಾರ ಇಲಾಖೆಯು ನಡೆಸುತ್ತಿರುವ ಅಂಗಡಿಗಳ ಸಂಖ್ಯೆ ಎಷ್ಟು?

ಉ) ನಿರುದ್ಯೋಗ ಪದವೀಧರರು ನಡೆಸುತ್ತಿರುವ ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು?

ಶ್ರೀ ಡಿ.ಬಿ. ಇನಾಂದಾರ್ (ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು) :

ಅ) ಕರ್ನಾಟಕ ಅಗತ್ಯ ವಸ್ತುಗಳ (ಸಾ.ವಿ.ಪ.) ನಿಯಂತ್ರಣ ಆದೇಶ 1992ರನ್ವಯ ನಿರ್ದಿಷ್ಟವಾದ ಸ್ಥಳಗಳಲ್ಲಿ ನ್ಯಾಯಬೆಲೆ ಅಂಗಡಿ ತೆರೆಯಲು ಅರ್ಜಿ ಆಹ್ವಾನಿಸಿ ಅರ್ಜಿಗಳನ್ನು ಪರಿಶೀಲಿಸಿ ಅರ್ಹತೆಯ ಹಾಗೂ ಆದ್ಯತೆಗಳನ್ವಯ ನ್ಯಾಯಬೆಲೆ ಅಂಗಡಿಯನ್ನು ಮಂಜೂರು ಮಾಡಬಹುದಾಗಿರುತ್ತದೆ.

ಆ) 1992ರಿಂದೀಚೆಗೆ ನಿಯಮಾವಳಿಗಳನ್ವಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮಂಜೂರು ಮಾಡಲಾಗುತ್ತಿದೆ.

ಇ) ರಾಜ್ಯದಲ್ಲಿ ದಿನಾಂಕ 30.9.2000ಕ್ಕೆ ಇರುವ ಒಟ್ಟು ನ್ಯಾಯಬೆಲೆ ಅಂಗಡಿಗಳ ಸಂಖ್ಯೆ - 20442

ಈ) ಯಾವುದೂ ಇಲ್ಲ.

ಉ) 1319.